155 ನೇ ಶ ೨ = 72 = (97)
4RK
1704

# ಕರ್ನಾಟಕ ವಿಧಾನ ಪರಿಷತ್ತು

## ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಐವನ್ ಡಿ ಸೋಜಾ, ಇವರ ನಿಯಮ-72 ರಡಿಯಲ್ಲಿ ಗಮನ ಸೆಳೆಯುವ ಸೂಚನೆಗೆ ಉತ್ತರ.

### ನಿಯಮ-72ರಡಿಯಲ್ಲಿ ಗಮನ ಸೆಳೆಯುವ ಸೂಚನೆ:-

ಮಂಗಳೂರು ಸಹಾಯಕ ಕಾರ್ಮಿಕ ಕಮೀಷನರ್ ವ್ಯಾಪ್ತಿಯಲ್ಲಿ ಅತ್ಯಂತ ಹೆಚ್ಚು ಫ್ಯಾಕ್ಟರಿಗಳು, ಬೀಡಿ ಕಾರ್ಮಿಕರು, ಅಸಂಘಟಿತ ಕಾರ್ಮಿಕರು, ವಲಸೆ ಕಾರ್ಮಿಕರು, ಕಟ್ಟಡ ಕಾರ್ಮಿಕರು ನೋಂದಾವಣೆ ಇರುವ ಜಿಲ್ಲೆಗಳಾಗಿದ್ದರೂ, ಹಾಸನ ಜಿಲ್ಲೆಯಲ್ಲಿ ಡೈಪ್ಯೂಟಿ ಲೇಬರ್ ಕಮೀಷನರ್ ಕಛೇರಿ ಇರುವುದರಿಂದ, ಕಾರ್ಮಿಕರಿಗೆ ನ್ಯಾಯವನ್ನು ಪಡೆಯಲು ವಿಳಂಬವಾಗುವುದರಿಂದ, ಅದನ್ನು ಮಂಗಳೂರಿನಲ್ಲಿ ಸ್ಥಾಪಿಸಲು ಕ್ರಮ ಕೈಗೊಳ್ಳುವ ಬಗ್ಗೆ ಮತ್ತು ದಕ್ಷಿಣ ಕನ್ನಡ ಜಿಲ್ಲೆಯಲ್ಲಿರುವ ಕಾರ್ಮಿಕ/ಅಸಂಘಟಿತ ಬಗ್ಗೆ ಚರ್ಚಿಸಲು ಮಾನ್ಯ ಕಾರ್ಮಿಕರ ಸಚಿವರ ಗಮನ ಸೆಳೆಯ ಬಯಸುತ್ತೇನೆ.

### ಉತ್ತರ:-

ಕಾರ್ಮಿಕ ಇಲಾಖೆಗೆ ಸಂಬಂಧಿಸಿದಂತೆ ಉಪ ವಿಭಾಗ/ವಿಭಾಗ/ಪ್ರಾದೇಶಿಕ ಮಟ್ಟದಲ್ಲಿ ಕಛೇರಿಗಳನ್ನು ಸ್ಥಾಪಿಸಲಾಗಿದ್ದು, ಅದರಂತೆ, ಮಂಗಳೂರಿನಲ್ಲಿ ಸಹಾಯಕ ಕಾರ್ಮಿಕ ಆಯುಕ್ತರ ಕಛೇರಿ ಮತ್ತು 02 ಕಾರ್ಮಿಕ ಅಧಿಕಾರಿ ಕಛೇರಿಗಳನ್ನು ಸ್ಥಾಪಿಸಲಾಗಿರುತ್ತದೆ. ಉಪ ಕಾರ್ಮಿಕ ಆಯುಕ್ತರ ಪ್ರಾದೇಶಿಕ ಕಛೇರಿಯನ್ನು ಹಾಸನದಲ್ಲಿ ಸ್ಥಾಪಿಸಲಾಗಿದ್ದು, ಸದರಿ ಕಛೇರಿಯ ವ್ಯಾಪ್ತಿಗೆ ದಕ್ಷಿಣ ಕನ್ನಡ, ಉಡುಪಿ, ಶಿವಮೊಗ್ಗ, ಚಿಕ್ಕಮಗಳೂರು, ಹಾಸನ, ಕೊಡಗು ಜಿಲ್ಲೆಗಳು ಒಳಪಟ್ಟಿರುತ್ತವೆ.

ಈ ಪ್ರಾದೇಶಿಕ ವ್ಯಾಪ್ತಿಯಲ್ಲಿ ಹೆಚ್ಚು ಪ್ಲಾಂಟೇಷನ್‌ಗಳು ಇರುವ ಜಿಲ್ಲೆಗಳಾದ ಚಿಕ್ಕಮಗಳೂರು, ಹಾಸನ ಮತ್ತು ಕೊಡಗು ಜಿಲ್ಲೆಗಳನ್ನು ಗಮನದಲ್ಲಿರಿಸಿಕೊಂಡು ಎಲ್ಲಾ ಜಿಲ್ಲೆಗಳಿಗೆ ಕೇಂದ್ರ ಸ್ಥಾನವಾಗಿ ಹಾಸನ ಇರುವುದರಿಂದ ಎಲ್ಲಾ ಜಿಲ್ಲೆಯ ಕಾರ್ಮಿಕರಿಗೆ ಅನುಕೂಲವಾಗುವ ಕಾರಣದಿಂದ ಈ ಪ್ರಾದೇಶಿಕ ಕಛೇರಿಯನ್ನು ಹಾಸನದಲ್ಲಿ ಸ್ಥಾಪಿಸಲಾಗಿರುತ್ತದೆ.

ಮುಂದುವರೆದು, ಮಂಗಳೂರಿನಲ್ಲಿ ಪ್ರಾದೇಶಿಕ ಕಛೇರಿಯನ್ನು ಸ್ಥಾಪಿಸಿದಲ್ಲಿ ಉಳಿದ ಜಿಲ್ಲೆಗಳ ಎಲ್ಲಾ ಕಾರ್ಮಿಕರು ಮಂಗಳೂರಿಗೆ ತೆರಳುವುದು ಕಷ್ಟಕರವಾಗುವುದರಿಂದ ಪ್ರಾದೇಶಿಕ ಕಛೇರಿಯನ್ನು ಹಾಸನದಲ್ಲಿ ಸ್ಥಾಪಿಸಲಾಗಿರುತ್ತದೆ.

### ದಕ್ಷಿಣ ಕನ್ನಡ ಜಿಲ್ಲೆಯಲ್ಲಿರುವ ಕಾರ್ಮಿಕ /ಅಸಂಘಟಿತರ ಬಗ್ಗೆ ಮಾಹಿತಿ.

ಕಾರ್ಮಿಕರಲ್ಲಿ ಸಂಘಟಿತ ಮತ್ತು ಅಸಂಘಟಿತ ಕಾರ್ಮಿಕರೆಂದು ಎರಡು ವರ್ಗಗಳಿದ್ದು ವಿವಿಧ ಕಾರ್ಖಾನೆಗಳಲ್ಲಿನ ಕಾರ್ಮಿಕರು, 10 ಅಥವಾ 10 ಕ್ಕಿಂತ ಹೆಚ್ಚು ಕಾರ್ಮಿಕರಿರುವ ಅಂಗಡಿ & ವಾಣಿಜ್ಯ ಸಂಸ್ಥೆಗಳಲ್ಲಿನ ಕಾರ್ಮಿಕರು, ಕರ್ನಾಟಕ ಕಾರ್ಮಿಕ ಕಲ್ಯಾಣ ಮಂಡಳಿಗೆ ವಂತಿಕೆ ಪಾವತಿಸುವ ಕಾರ್ಖಾನೆಗಳು ಹಾಗೂ ಇತರೆ ಸಂಸ್ಥೆಗಳ ಕಾರ್ಮಿಕರು ಹಾಗೂ ವಿವಿಧ ಕಾರ್ಮಿಕ ಕಾಯ್ದೆಗಳಡಿ ಉದ್ಯೋಗದ ಭದ್ರತೆ,

ಸಾಮಾಜಿಕ ಭದ್ರತೆಗಳನ್ನು ಹೊಂದಿರುವ ಎಲ್ಲಾ ಬಗೆಯ ಕಾರ್ಮಿಕರು ಸಂಘಟಿತ ಕಾರ್ಮಿಕರಾಗಿರುತ್ತಾರೆ. ಹಾಗೆಯೇ, 10 ಕ್ಕಿಂತ ಕಡಿಮೆ ಕಾರ್ಮಿಕರಿರುವ ಅಂಗಡಿ ಮತ್ತು ವಾಣಿಜ್ಯ ಸಂಸ್ಥೆಗಳಲ್ಲಿನ ಕಾರ್ಮಿಕರು, ಕಾರ್ಮಿಕ ಕಾಯ್ದೆಗಳನ್ವಯ ಉದ್ಯೋಗದ ಭದ್ರತೆ ಮತ್ತು ಸಾಮಾಜಿಕ ಭದ್ರತೆಗಳನ್ನು ಹೊಂದಿರದೇ ಇರುವ ಕಟ್ಟಡ & ಇತರೇ ನಿರ್ಮಾಣ ಕಾರ್ಮಿಕರು ಹಾಗೂ ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಕಾಯ್ದೆಯಡಿ ಬರುವ ಎಲ್ಲಾ ಬಗೆಯ ಕಾರ್ಮಿಕರು ಅಸಂಘಟಿತ ಕಾರ್ಮಿಕರಾಗಿರುತ್ತಾರೆ.

ಕಾರ್ಮಿಕರ ಸಂಖ್ಯೆಯ ಬಗ್ಗೆ ಇಲಾಖೆಯ ವತಿಯಿಂದ ಯಾವುದೇ ಸಮೀಕ್ಷೆ ನಡೆಸಿರುವುದಿಲ್ಲ. ಆದ್ದರಿಂದ ಕಾರ್ಮಿಕರ ಸಂಖ್ಯೆಯ ಬಗ್ಗೆ ನಿಖರ ಮಾಹಿತಿ ಲಭ್ಯವಿರುವುದಿಲ್ಲ. ಆದರೆ ವಿವಿಧ ಕಾರ್ಮಿಕ ಕಾಯ್ದೆಗಳಡಿ ಸಂಸ್ಥೆಗಳ ನೋಂದಣಿ ಸಂದರ್ಭದಲ್ಲಿ ಒದಗಿಸಲಾದ ಸಂಘಟಿತ ಕಾರ್ಮಿಕರು ಹಾಗು ಇಲಾಖೆಯ ಅಧೀನದಲ್ಲಿರುವ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿ, ಕರ್ನಾಟಕ ರಾಜ್ಯ ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮಂಡಳಿ ಹಾಗೂ ಕರ್ನಾಟಕ ರಾಜ್ಯ ಮೋಟಾರು ಸಾರಿಗೆ ಇತರೆ ಸಂಬಂಧಿತ ಕಾರ್ಮಿಕರ ಸಾಮಾಜಿಕ ಭದ್ರತೆ ಮತ್ತು ಕ್ಷೇಮಾಭಿವೃದ್ಧಿ ಮಂಡಳಿಗಳು ವಿವಿಧ ಸಾಮಾಜಿಕ ಭದ್ರತಾ ಯೋಜನೆಗಳನ್ನು ಅನುಷ್ಠಾನಗೊಳಿಸುವ ಸಂಬಂಧ ನೋಂದಾಯಿಸಿದ ಅಸಂಘಟಿತ ಕಾರ್ಮಿಕರ ವಿವರಗಳನ್ನು **ಅನುಬಂಧದಲ್ಲಿ** ಒದಗಿಸಿದೆ.

**ಕಾಇ 109 ಎಲ್ಇಟಿ 2025**

**(ಸಂತೋಷ್ ಎಸ್. ಲಾಡ್)**
**ಕಾರ್ಮಿಕ ಸಚಿವರು**

# ಅನುಬಂಧ

## I. ಸಂಘಟಿತ ಕಾರ್ಮಿಕರ ಮಾಹಿತಿ

1. 10 ಅಥವಾ 10 ಕ್ಕಿಂತ ಹೆಚ್ಚು ಕಾರ್ಮಿಕರನ್ನು ಹೊಂದಿರುವ ನೋಂದಾಯಿತ ಅಂಗಡಿ ಮತ್ತು ವಾಣಿಜ್ಯ ಸಂಸ್ಥೆಗಳಲ್ಲಿ ದುಡಿಯುತ್ತಿರುವ ಕಾರ್ಮಿಕರ ಸಂಖ್ಯೆ -**25817**.
2. ಕಾರ್ಖಾನೆಗಳಲ್ಲಿ ದುಡಿಯುತ್ತಿರುವ ಕಾರ್ಮಿಕರ ಸಂಖ್ಯೆ – **49857**.
3. ಮೋಟಾರು ಸಾರಿಗೆ ಕಾರ್ಮಿಕರ ಕಾಯ್ದೆಯಡಿ ನೋಂದಣಿಯಾದ ಮೋಟಾರು ಸಾರಿಗೆ ಸಂಸ್ಥೆಗಳಲ್ಲಿ ದುಡಿಯುತ್ತಿರುವ ಕಾರ್ಮಿಕರ ಸಂಖ್ಯೆ -**2514**
4. ತೋಟ ಕಾರ್ಮಿಕರ ಕಾಯ್ದೆಯಡಿ ನೋಂದಣಿಯಾದ ತೋಟಗಳಲ್ಲಿ ದುಡಿಯುತ್ತಿರುವ ಕಾರ್ಮಿಕರ ಸಂಖ್ಯೆ - **7081**
5. **ಕರ್ನಾಟಕ ಕಾರ್ಮಿಕ ಕಲ್ಯಾಣ ಮಂಡಳಿಗೆ ವಂತಿಗೆ ಪಾವತಿಸುವ 50 ಕ್ಕಿಂತ ಹೆಚ್ಚು ಕಾರ್ಮಿಕರನ್ನು ಹೊಂದಿದ ಅಂಗಡಿ ವಾಣಿಜ್ಯ ಸಂಸ್ಥೆಗಳು ಹಾಗೂ ಎಲ್ಲಾ ಕಾರ್ಖಾನೆಗಳಲ್ಲಿನ ಕಾರ್ಮಿಕರಲ್ಲದೆ ಮಂಡಳಿಗೆ ವಂತಿಗೆ ಪಾವತಿಸುವ ಇನ್ನಿತರ ಸಂಸ್ಥೆಗಳಾದ ಬೀಡಿ ಸಂಸ್ಥೆಗಳು, ಆಸ್ಪತ್ರೆಗಳು, ಶಾಲೆ/ಕಾಲೇಜು/ಟ್ರಸ್ಟ್‌ಗಳಲ್ಲಿ ದುಡಿಯುವ ಕಾರ್ಮಿಕರು-13,916**

## II. ಅಸಂಘಟಿತ ಕಾರ್ಮಿಕರ ಮಾಹಿತಿ

1. 10 ಕ್ಕಿಂತ ಕಡಿಮೆ ಕಾರ್ಮಿಕರಿರುವ ಅಂಗಡಿ ಮತ್ತು ವಾಣಿಜ್ಯ ಸಂಸ್ತೆಗಳಲ್ಲಿನ ಕಾರ್ಮಿಕರ ಸಂಖ್ಯೆ: **38,488**
2. ಕರ್ನಾಟಕ ರಾಜ್ಯ ಕಟ್ಟಡ ಮತ್ತು ಇತರೆ ನಿರ್ಮಾಣ ಕಲ್ಯಾಣ ಮಂಡಳಿಯಲ್ಲಿ ಫಲಾನುಭವಿಗಳಾಗಿ ನೋಂದಣಿಯಾದ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಸಂಖ್ಯೆ: **71,131**
3. ಬೀಡಿ ಕಾರ್ಮಿಕರ ಸಂಖ್ಯೆ**: 193959**
4. ಕರ್ನಾಟಕ ರಾಜ್ಯ ಅಸಂಘಟಿತ ಕಾರ್ಮಿಕ ಸಾಮಾಜಿಕ ಭದ್ರತಾ ಮಂಡಳಿಯಲ್ಲಿ ಅಸಂಘಟಿತ ಕಾರ್ಮಿಕರಿಗೆಸಾಮಾಜಿಕ ಭದ್ರತೆ ಒದಗಿಸುವ ಉದ್ದೇಶದಿಂದ ವಿವಿಧ ಸಾಮಾಜಿಕ ಭದ್ರತಾ ಯೋಜನೆಗಳನ್ನು ಜಾರಿಗೊಳಿಸುತ್ತಿದ್ದು, ದಕ್ಷಿಣ ಕನ್ನಡ ಜಿಲ್ಲೆಗೆ ಸಂಬಂಧಿಸಿದಂತೆ ಸದರಿ ಯೋಜನೆಗಳಡಿ ನೋಂದಾಯಿತರಾದ ಅಸಂಘಟಿತ ಕಾರ್ಮಿಕರ ಸಂಖ್ಯೆ ಈ ಕೆಳಕಂಡಂತಿದೆ.

| **ಕ್ರ. ಸಂ** | **ಯೋಜನೆ/ಕಾರ್ಯಕ್ರಮ** | **ನೋಂದಾಯಿತ ಕಾರ್ಮಿಕರಸಂಖ್ಯೆ** |
|---|---|---|
| 1 | ಅಂಬೇಡ್ಕರ್ ಕಾರ್ಮಿಕ ಸಹಾಯ ಹಸ್ತ ಯೋಜನೆ | **77,455** |
| 2 | ಕರ್ನಾಟಕ ರಾಜ್ಯ ಗಿಗ್ ಕಾರ್ಮಿಕರ ವಿಮಾ ಯೋಜನೆ | **916** |
| 3 | ಕರ್ನಾಟಕ ರಾಜ್ಯ ದಿನ ಪತ್ರಿಕೆ ವಿತರಣಾ ಕಾರ್ಮಿಕರ ಅಪಘಾತ ಪರಿಹಾರ ಮತ್ತು ವೈದ್ಯಕೀಯ ಸೌಲಭ್ಯ ಯೋಜನೆ | **96** |
| 4 | ಕರ್ನಾಟಕ ರಾಜ್ಯ ಮೋಟಾರು ಸಾರಿಗೆ ಹಾಗೂ ಇತರೆ ಸಂಬಂಧಿತ ಕಾರ್ಮಿಕರ ಸಾಮಾಜಿಕ ಭದ್ರತೆ ಮತ್ತು ಕ್ಷೇಮಾಭಿವೃದ್ಧಿ ಮಂಡಳಿ (ಕರ್ನಾಟಕ ರಾಜ್ಯ ಖಾಸಗಿ ವಾಣಿಜ್ಯ ಸಾರಿಗೆ ಕಾರ್ಮಿಕರ ಅಪಘಾತ ಪರಿಹಾರ ಯೋಜನೆ) | **32,784** |
| 5 | ಇ-ಶ್ರಮ್ ಕಾರ್ಯಕ್ರಮದಡಿ ಅಸಂಘಟಿತ ಕಾರ್ಮಿಕರ ನೋಂದಣಿ | **2,49,451** |

## ಸಂಘಟಿತ ಕಾರ್ಮಿಕರಿಗೆ ವಿವಿಧ ಯೋಜನೆಗಳ ಸೌಲಭ್ಯದ ಮಾಹಿತಿ:

ಕರ್ನಾಟಕ ಕಾರ್ಮಿಕ ಕಲ್ಯಾಣ ನಿಧಿಗೆ ಸಂಘಟಿತ ಕಾರ್ಮಿಕರಿಂದ ಪ್ರತಿ ವರ್ಷ ರೂ.20/- ಮತ್ತು ಪ್ರತಿ ಕಾರ್ಮಿಕರಿಗೆ ಮಾಲೀಕರಿಂದ ರೂ.40/- ರಂತೆ ಹಾಗೂ ಸರ್ಕಾರದಿಂದ ಪ್ರತಿ ಕಾರ್ಮಿಕರಿಂದ ರೂ.20/- ರಂತೆ ವಂತಿಗೆಯಾಗಿ ಪಾವತಿಸಲಾಗುತ್ತಿದೆ. ಈ ವಂತಿಗೆಯ ಮೊತ್ತವನ್ನು ಸಂಘಟಿತ ಕಾರ್ಮಿಕರು ಮತ್ತು ಅವರ ಕುಟುಂಬದ ಅವಲಂಬಿತರಿಗೆ ಕಲ್ಯಾಣ ಯೋಜನೆಗಳಡಿ ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಈ ಕೆಳಕಂಡ ಸೌಲಭ್ಯಗಳನ್ನು ನೀಡಲಾಗುತ್ತಿದೆ.

**ಸಂಘಟಿತ ಕಾರ್ಮಿಕರಿಗೆ ಕಳೆದ ಎರಡು ವರ್ಷಗಳಲ್ಲಿ ನೀಡಲಾದ ವಿವಿಧ ಕಲ್ಯಾಣ ಸೌಲಭ್ಯಗಳ ವಿವರ ಈ ಕೆಳಕಂಡಂತಿದೆ**

| ಕ್ರ ಸ | ಯೋಜನೆಗಳ ವಿವರ | 2023-24 | | 2024-25 | |
|---|---|---|---|---|---|
| | | ಫಲಾನುಭವಿಗಳ ಸಂಖ್ಯೆ | ಮೊತ್ತ | ಫಲಾನುಭವಿಗಳ ಸಂಖ್ಯೆ | ಮೊತ್ತ |
| 1 | ಕಾರ್ಮಿಕರ ಮಕ್ಕಳಿಗೆ ಶೈಕ್ಷಣಿಕ ಪ್ರೋತ್ಸಾಹ ಧನ ಸಹಾಯ | 2078 | 2,09,92,000/- | 2163 | 2,21,40,000 |
| 4 | ಮಹಿಳಾ ಕಾರ್ಮಿಕರಿಗೆ ಹೆರಿಗೆ ಭತ್ಯೆ ಸೌಲಭ್ಯ | 14 | 1,40,000/- | 69 | 6,90,000 |
| 5 | ಮೃತ ಕಾರ್ಮಿಕನ ಅಂತ್ಯ ಸಂಸ್ಕಾರಕ್ಕೆ ಧನ ಸಹಾಯ | 28 | 2,80,000/- | 18 | 1,80,000 |

**ಅಸಂಘಟಿತ ಕಾರ್ಮಿಕರಿಗೆ ವಿವಿಧ ಯೋಜನೆಗಳ ಸೌಲಭ್ಯದ ಮಾಹಿತಿ:**

ಕಾರ್ಮಿಕ ಇಲಾಖೆಯ ಅಧೀನದಲ್ಲಿ ಕಾರ್ಯನಿರ್ವಹಿಸುತ್ತಿರುವ ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿ ಹಾಗೂ ಕರ್ನಾಟಕ ರಾಜ್ಯ ಅಸಂಘಟಿತ ಕಾರ್ಮಿಕ ಸಾಮಾಜಿಕ ಭದ್ರತಾ ಮಂಡಳಿಗಳಿಂದ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರು ಸೇರಿದಂತೆ ನೋಂದಾಯಿತ ಅಸಂಘಟಿತ ಕಾರ್ಮಿಕರಿಗೆ ವಿವಿಧ ಕಲ್ಯಾಣ ಮತ್ತು ಸಾಮಾಜಿಕ ಭದ್ರತಾ ಸೌಲಭಗ್ಯಗಳನ್ನು ನೀಡಲಾಗುತ್ತಿದ್ದು ಅವುಗಳ ವಿವರ ಈ ಕೆಳಕಂಡಂತಿದೆ

1. ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಲ್ಯಾಣ ಮಂಡಳಿಯಲ್ಲಿ ದಕ್ಷಣ ಕನ್ನಡ ಜಿಲ್ಲೆಯಲ್ಲಿ ನೊಂದಾಯಿತರಾದ ಕಟ್ಟಡ ಕಾರ್ಮಿಕರ ವಿವರಗಳು ಮತ್ತು ನೋಂದಾಯಿತರಾದ ಫಲಾನುಭವಿಗಳಿಗೆ ಕಳೆದ ಎರಡು ವರ್ಷಗಳಲ್ಲಿ ನೀಡಿರುವ ಸೌಲಭ್ಯಗಳ ವಿವರಗಳು ಈ ಕೆಳಕಂಡಂತಿದೆ.

| ದಕ್ಷಿಣ ಕನ್ನಡ ಜಿಲ್ಲೆಯ ಯೋಜನೆಗಳ ವರದಿ | | 2023-24 | | 2024-25 | |
|---|---|---|---|---|---|
| ಕ್ರ. ಸಂ | ಯೋಜನೆಯ ಹೆಸರು | ಸ್ವೀಕರಿಸಿದ ಅರ್ಜಿಗಳ ಒಟ್ಟು ಸಂಖ್ಯೆ | ಅನುಮೋದಿತ ಅರ್ಜಿಗಳ ಒಟ್ಟು ಸಂಖ್ಯೆ | ಸ್ವೀಕರಿಸಿದ ಅರ್ಜಿಗಳ ಒಟ್ಟು ಸಂಖ್ಯೆ | ಅನುಮೋದಿತ ಅರ್ಜಿಗಳ ಒಟ್ಟು ಸಂಖ್ಯೆ |
| 1. | ತಾಯಿ ಮಗು ಸಹಾಯ ಹಸ್ತ | 8 | 1 | 0 | 0 |
| 2 | ಪಿಂಚಣಿ | 382 | 264 | 515 | 378 |
| 3 | ವೈದ್ಯಕೀಯ ವೆಚ್ಚ | 82 | 9 | 33 | 11 |
| 4 | ಮದುವೆ ಸಹಾಯ ಧನ | 1198 | 909 | 825 | 551 |
| 5 | ಅಂತಿಮ ಸಂಸ್ಕಾರ ಮತ್ತು ಅನುಗ್ರಹ ರಾಶಿ | 206 | 171 | 240 | 173 |
| 6 | ದುರ್ಬಲತೆ ಪಿಂಚಣಿ | 1 | 0 | 2 | 1 |
| 7 | ಹೆರಿಗೆ ಧನ ಸಹಾಯ | 30 | 5 | 10 | 4 |
| 8 | ಪ್ರಮುಖ ವೈದ್ಯಕೀಯ ವೆಚ್ಚ | 108 | 52 | 60 | 36 |
| 9 | ಅಪಘಾತ ಪರಿಹಾರ | 21 | 10 | 21 | 12 |
| 10 | ಮುಂದುವರಿಕೆ ಪಿಂಚಣಿ | 1 | 0 | 662 | 501 |
| 11 | ಮುಂದುವರಿಕೆ ದುರ್ಬಲತೆ ಪಿಂಚಣಿ | 0 | 0 | 0 | 0 |

**2. ಕರ್ನಾಟಕ ರಾಜ್ಯ ಅಸಂಘಟಿತ ಸಾಮಾಜಿಕ ಭದ್ರತಾ ಮಂಡಳಿಯಲ್ಲಿ ಪರಿಹಾರ ಪಡೆದ ಫಲಾನುಭವಿಗಳ ವಿವರ:**

| ಕ್ರ. ಸಂ. | ಯೋಜನೆ/ಕಾರ್ಯಕ್ರಮ | 2023-24 ನೇ ಸಾಲಿನಲ್ಲಿ ಪರಿಹಾರ ಪಡೆದ ಫಲಾನುಭವಿಗಳ ವಿವರ | | 2024-25 ನೇ ಸಾಲಿನಲ್ಲಿ ಪರಿಹಾರ ಪಡೆದ ಫಲಾನುಭವಿಗಳ ವಿವರ | |
|---|---|---|---|---|---|
| | | ಫಲಾನುಭವಿಗಳ ಸಂಖ್ಯೆ | ಪರಿಹಾರದ ಮೊತ್ತ (ರೂ.ಲಕ್ಷಗಳಲ್ಲಿ) | ಫಲಾನುಭವಿಗಳ ಸಂಖ್ಯೆ | ಪರಿಹಾರದ ಮೊತ್ತ (ರೂ.ಲಕ್ಷಗಳಲ್ಲಿ) |
| 1 | ಕರ್ನಾಟಕ ರಾಜ್ಯ ಖಾಸಗಿ ವಾಣಿಜ್ಯ ಸಾರಿಗೆ ಕಾರ್ಮಿಕರ ಅಪಘಾತ ಪರಿಹಾರ ಯೋಜನೆ<br>ಅಪಘಾತ ಪರಿಹಾರ ಸೌಲಭ್ಯ | **14** | **70.00** | **10** | **50.00** |
| | ಶೈಕ್ಷಣಿಕ ಧನ ಸಹಾಯ | **13** | **1.30** | **12** | **1.20** |
| 2 | ಕರ್ನಾಟಕ ರಾಜ್ಯ ಗಿಗ್ ಕಾರ್ಮಿಕರ ವಿಮಾ ಯೋಜನೆ | - | - | **1** | **4.00** |
| 3 | ಕರ್ನಾಟಕ ರಾಜ್ಯ ದಿನ ಪತ್ರಿಕೆ ವಿತರಣಾ ಕಾರ್ಮಿಕರ ಅಪಘಾತ ಪರಿಹಾರ ಮತ್ತು ವೈದ್ಯಕೀಯ ಸೌಲಭ್ಯ ಯೋಜನೆ | - | - | **1** | **1.00** |